14

# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\1723\2014\ಸನಿಕಾಸ-2 ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 3.12.2016

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ದೇವನಹಳ್ಳಿ ತಾಲ್ಲೂಕು ಹಾರಡಿಪುರ ಗ್ರಾಮದ ಸರ್ಕಾರಿ ಗೋಮಾಳ ಜಮೀನು ಸ. ನಂ: 62 ವಿಸ್ತೀರ್ಣ 12 ಗು., ಜಮೀನನ್ನು ಅಕ್ರಮವಾಗಿ ಅತಿಕ್ರಮಿಸಿದ ಶ್ರೀಮತಿ. ಅನ್ನಪೂರ್ಣ ಗಂಡ ಬಿ. ಮುನಿಕೃಷ್ಣಪ್ಪ ಎನ್ನುವವರಿಂದ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆದು ಇನ್ನುಮುಂದೆ ಯಾರು ಅತಿಕ್ರಮಿಸದಂತೆ ತಂತಿ ಬೇಲಿಹಾಕಲು ಕ್ರಮ ಕೈಗೊಳ್ಳುವ –ಕುರಿತು.

*******

ಶ್ರೀ.ಎಂ.ಸುಧಾಕರ ಬಿನ್ ಲೇಟ್ ಸಿ.ಬಿ.ಮುನಿಶಾಮಪ್ಪ, ಮಾರ್ಕೆಟ್ ರಸ್ತೆ, ವಿಜಯಪುರ ಟೌನ್, ದೇವನಹಳ್ಳಿ ತಾಲ್ಲೂಕು ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ.ಕೇಶವ ಮೂರ್ತಿ, ತಹಶೀಲ್ದಾರ್, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ "ಎದುರುದಾರ ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ದೇವನಹಳ್ಳಿ ತಾಲ್ಲೂಕು ಹಾರಡಿಪುರ ಗ್ರಾಮದ ಸ. ನಂ: 62 ವಿಸ್ತೀರ್ಣ 12 ಗು., ಜಮೀನು ಸರ್ಕಾರಕ್ಕೆ ಸೇರಿದ್ದು ಆದರೆ ದೂರುದಾರರ ತಂದೆ

13

ಕಾಲದಿಂದಲು ಅವರೇ ಸ್ವಾಧೀನಾನುಭವದಲ್ಲಿದ್ದು ಭೂ ಮಂಜೂರಾತಿಗಾಗಿ ಫಾರಂ ನಂ: 53ಅನ್ನು ಸಲ್ಲಿಸಿರುತ್ತಾರೆ. ಈ ಜಮೀನಿನ ಉತ್ತರಕ್ಕೆ ಸ. ನಂ: 67/1ಇದ್ದು ಈ ಜಮೀನಿನ ಮಾಲೀಕರಾದ ಶ್ರೀಮತಿ. ಅನ್ನಪೂರ್ಣಮ್ಮ ರವರು ಕಲ್ಯಾಣ ಮಂಟಪ ನಿರ್ಮಿಸಲು ಸರ್ಕಾರದಿಂದ ಪರವಾನಗಿ ಪಡೆದಿದ್ದಾರೆ. ಆದರೆ ಇವರು ಕಲ್ಯಾಣ ಮಂಟಪ ನಿರ್ಮಿಸಲು ಸ. ನಂ: 62ರ ಸರ್ಕಾರಿ ಜಮೀನಿನನ್ನು ಒತ್ತುವರಿ ಮಾಡಿಕೊಂಡು ಸುಳ್ಳು ದಾಖಲೆಗಳನ್ನು ಸೃಷ್ಠಿಸಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಸರ್ಕಾರಿ ಜಮೀನನ್ನು ವಶಕ್ಕೆ ತೆಗೆದುಕೊಳ್ಳಲು ಶಿಫಾರಸ್ಸು ಮಾಡಬೇಕೆಂದು ದೂರು ಸಲ್ಲಿಸಿದ್ದಾರೆ.

3) ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಹಾರಡಿಪುರ ಗ್ರಾಮದ ಸ. ನಂ: 62 ಕ್ಷೇತ್ರ 12ಗು., ಜಮೀನು ಒತ್ತುವರಿಯಾದ ಬಗ್ಗೆ ದೇವನಹಳ್ಳಿಯ ಸಿವಿಲ್ ನ್ಯಾಯಾಲಯದಲ್ಲಿ ಒ.ಎಸ್. 1037/2012 ಅಂತ ಪ್ರಕರಣ ದಾಖಲಾಗಿದ್ದು ಅದು ವಿಚಾರಣೆ ಹಂತದಲ್ಲಿರುತ್ತದೆ. ಆದ್ದರಿಂದ ಪ್ರಕರಣ ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4) ದೂರುದಾರರು ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಅ) **"ಸ. ನಂ: 62ರ ಪಹಣಿ ಪತ್ರಿಕೆಯಲ್ಲಿ ಸರ್ಕಾರಿ ಗೋಮಾಳ ಅಂತ ನಮೂದಾಗಿರುತ್ತದೆ. ಆದರೆ ಶ್ರೀಮತಿ. ಅನ್ನಪೂರ್ಣಮ್ಮ ರವರು ವಿಜಯಪುರ ಪುರಸಭೆ ಕಾರ್ಯಾಲಯದಿಂದ ಸ. ನಂ: 67/1ರಲ್ಲಿ ಕಟ್ಟಡ ಕಟ್ಟಲು ಪರವಾನಗಿ ಪಡೆದುಕೊಂಡ ದಾಖಲೆಗಳು ಲಭ್ಯವಿರುತ್ತದೆ.**

ಆ) ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರಿನ ಅಂಶಗಳ ಬಗ್ಗೆ ಯಾವುದೇ ಸ್ಪಷ್ಟೀಕರಣ ನೀಡದೆ ನ್ಯಾಯಾಲಯದಲ್ಲಿ ದಾವೆ ಮಾತ್ರ ಚಾಲ್ತಿಯಲ್ಲಿದೆ ಅಂತ ಹೇಳಿದ್ದಾರೆ. ಆದರೆ ಈ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ಕೇವಲ ನ್ಯಾಯಾಲಯದಲ್ಲಿ ದಾವೆ ಚಾಲ್ತಿಯಲ್ಲಿದ್ದರೆ ಸಾಲದು ಅದು ಯಾವ ರೀತಿ ಅತಿಕ್ರಮಣ ತೆರವು ಮಾಡುವುದರ ಮೇಲೆ ಪರಿಣಾಮ ಬೀರುತ್ತದೆ ಎನ್ನುವ ಬಗ್ಗೆ ದಾಖಲಾತಿಗಳ ಸಹಿತ ಎದುರುದಾರರು ವಿವರಣೆ ನೀಡಬೇಕಾಗುತ್ತದೆ.

ಇ) ಈ ಪ್ರಕರಣದಲ್ಲಿ ಸರ್ಕಾರಿ ಜಮೀನಿನ ಪಕ್ಕದ ಸ. ನಂ: 67/1ರ ಮಾಲೀಕರಾದ ಶ್ರೀಮತಿ ಅನ್ನಪೂರ್ಣರವರು ಜಮೀನು ಒತ್ತುವರಿ ಮಾಡಿಕೊಂಡು ಕಟ್ಟಡ ಕಟ್ಟಲು ಪರವಾನಗಿ ಪಡೆದು ಕಟ್ಟಡ ಕಟ್ಟಲು ಪ್ರಾರಂಭಿಸಿದರೂ ಸಹ ಎದುರುದಾರರು ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

6) ಈ ಪ್ರಕರಣದಲ್ಲಿ ಸರ್ಕಾರಿ ಗೋಮಾಳ ಜಮೀನು ಸ. ನಂ: 62 ವಿಸ್ತೀರ್ಣ 12 ಗು., ಜಮೀನನ್ನು ಅಕ್ರಮವಾಗಿ ಅತಿಕ್ರಮಿಸಿದ ಶ್ರೀಮತಿ. ಅನ್ನಪೂರ್ಣ ಗಂಡ ಬಿ. ಮುನಿಕೃಷ್ಣಪ್ಪ ಎನ್ನುವವರಿಂದ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆದು ಇನ್ನುಮುಂದೆ ಯಾರು ಅತಿಕ್ರಮಿಸದಂತೆ ತಂತಿ ಬೇಲಿಹಾಕಲು ಕ್ರಮ ಕೈಗೊಳ್ಳುವಂತೆ ಸಕ್ಷಮ ಪ್ರಾಧಿಕಾರಕ್ಕೆ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(1) ರಡಿಯಲ್ಲಿ ನಿರ್ದೇಶಿಸುವುದು ಅಗತ್ಯವಾಗಿರುತ್ತದೆ. ಹಿಗಾಗಿ ಮಾನ್ಯ ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಗೆ ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಆದೇಶಿಸುವ ಅಧಿಕಾರವನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12 (1)ರಲ್ಲಿ ಗೌರವಾನ್ವಿತ ಉಪಲೋಕಾಯುಕ್ತರು ಹೊಂದಿದ್ದಾರೆ.

7) ಆದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ

ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ಮಾನ್ಯ ಉಪಲೋಕಾಯುಕ್ತ-2 ರವರಿಗೆ ತಿಳಿಸಲು ಹೇಳಿದೆ.

3/12/16.

(ನ್ಯಾಯಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.

3/12